ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 25-04-2017

## ಪತ್ರಿಕಾ ಪ್ರಕಟಣೆ

# ಮೇ 8 ರಿಂದ ಇಂದ್ರಧನುಷ್ ಅಭಿಯಾನ

ಬೆಂಗಳೂರು, ಏಪ್ರಿಲ್ 25 ( ಕರ್ನಾಟಕ ವಾರ್ತೆ) :

ರಾಜ್ಯದ ಆರು ಜಿಲ್ಲೆಗಳಲ್ಲಿ ಗರ್ಭಿಣಿ ಸ್ತ್ರೀಯರು ಹಾಗೂ ಎರಡು ವರ್ಷದೊಳಗಿನ ಮತ್ತು ಐದ ರಿಂದ ಆರು ವರ್ಷದ ಅಪೂರ್ಣ ಲಸಿಕೆ ಪಡೆದಿರುವ ಹಾಗೂ ಯಾವುದೇ ಲಸಿಕೆಗಳನ್ನು ಪಡೆಯದಿರುವ ಮಕ್ಕಳಿಗೆ ಲಸಿಕೆ ನೀಡಲು 2017 ರ ಮೇ ತಿಂಗಳಿಂದ ಇಂದ್ರಧನುಷ್ ಅಭಿಯಾನವನ್ನು ಪ್ರಾರಂಭಿಸಲಾಗುವುದು.

ಈ ಕುರಿತ ಪೂರ್ವ ಸಿದ್ಧತೆಯನ್ನು ಪರಿಶೀಲಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ಈ ಅಭಿಯಾನವನ್ನು ಮೇ, ಜೂನ್, ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ನಡೆಸಲಾಗುತ್ತದೆ. ರಾಜ್ಯದಲ್ಲಿ ನಾಲ್ಕನೆ ಹಂತದ ಇಂದ್ರಧನುಷ್ ಅಭಿಯಾನಕ್ಕೆ ಬಿ.ಬಿ.ಎಂ.ಪಿ.ಯೂ ಸೇರಿದಂತೆ ಬೆಂಗಳೂರು, ಬೆಳಗಾವಿ, ಕಲಬುರಗಿ, ವಿಜಯಪುರ, ಮೈಸೂರು ಹಾಗೂ ತುಮಕೂರು ಜಿಲ್ಲೆಗಳನ್ನು ಗುರುತಿಸಲಾಗಿದೆ. 2017 ರ ಮೇ 8 ರಿಂದ 7 ಕಾರ್ಯದಿನಗಳ ಕಾಲ (ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ), ಜೂನ್, ಜುಲೈ, ಆಗಸ್ಟ್ ತಿಂಗಳ 7 ನೇ ತಾರೀಖಿನಿಂದ ಏಳು ಕಾರ್ಯದಿನಗಳ ಕಾಲ ಲಸಿಕೆಯಿಂದ ವಂಚಿತರಾದ ಮಕ್ಕಳು ಮತ್ತು ಗರ್ಭಿಣಿ ಸ್ತ್ರೀಯರಿಗೆ ಆಯ್ದ ಕೇಂದದ್ರಗಳಲ್ಲಿ ವಿಶೇಷವಾಗಿ ಲಸಿಕೆಗಳನ್ನು ನೀಡಲಾಗುವುದು.

ಇಂಧ್ರಧನುಷ್ ಅಭಿಯಾನದಡಿ ಹಿಂದೆ 7 ಲಸಿಕೆಗಳನ್ನು ನೀಡಲಾಗುತ್ತಿತ್ತು. ಪ್ರಸ್ತುತ ಈ ಕಾರ್ಯಕ್ರಮದಡಿ 10 ಲಸಿಕೆಗಳನ್ನು ನೀಡಲಾಗುತ್ತಿದೆ. ಗರ್ಭಿಣಿ ಸ್ತ್ರೀಯರು, ಎರಡು ವರ್ಷದೊಳಗಿನ ಮಕ್ಕಳು ಹಾಗೂ ಐದರಿಂದ ಆರು ವರ್ಷದ ಮಕ್ಕಳು ಈ ಕಾರ್ಯಕ್ರಮದ ವ್ಯಾಪ್ತಿಗೆ ಬರುತ್ತಾರೆ. ಇಂದ್ರಧನುಷ್ ಅಭಿಯಾನದಡಿ ಕೊಳಚೆ ಮತ್ತು ವಲಸೆ ಪ್ರದೇಶ, ಅಲೇಮಾರಿ ಪ್ರದೇಶ ಇಟ್ಟಿಗೆ ಕಾರ್ಖಾನೆ, ಕಟ್ಟಡ ನಿರ್ಮಾಣ ಪ್ರದೇಶಗಳು ಮತ್ತಿತರ ಎಡೆಗಳಲ್ಲಿ ಲಸಿಕೆ ವಂಚಿತರನ್ನು ಗುರುತಿಸಿ ಲಸಿಕೆ ನೀಡಲಾಗುತ್ತದೆ. ಪೋಲೀಯೋ, ಹೆಪಟೈಟಿಸ್ ಬಿ, ಬಾಲಕ್ಷಯ, ಡಿಫ್ತಿರಿಯ, ಪೆರ್ಟುಸಿಸ್, ಧನುರ್ವಾಯು, ಹಿಬ್, ದಡಾರ, ರೂಬೆಲ್ಲಾ ಹಾಗೂ ಜಾಪಾನಿಸ್ ಎನ್‌ಸಫಲೈಟಿಸ್ ಹತ್ತು ಮಾರಕ ರೋಗಳಿಗೆ ಲಸಿಕೆ ನೀಡಲಾಗುತ್ತಿದೆ. ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ,ಮನೆ ಭೇಟಿ ನೀಡಿ ಲಸಿಕೆ ಬಿಟ್ಟು ಹೋಗಿರುವ ಫಲಾನುಭವಿಗಳನ್ನು ಗುರುತಿಸಿ ಲಸಿಕೆ ಪಡೆಯುವಂತೆ ಪ್ರೇರೆಪಿಸುತ್ತಾರೆ. ಇದಕ್ಕಾಗಿ ಅವರಿಗೆ ಗೌರವಧನ ನೀಡಲಾಗುತ್ತದೆ ಎಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ, ಶಿಕ್ಷಣ ಇಲಾಖೆಗಳ ಸಹಯೋಗದೊಂದಿಗೆ ಈ ಯೋಜನೆಯನ್ನು ಯಶಸ್ವಿಗೊಳಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೆ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ನೆರವನ್ನೂ ಪಡೆಯುವಂತೆ ಸಲಹೆ ನೀಡಿದರು. ಸಭೆಯಲ್ಲಿ ಆಯೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಮತ್ತಿತರ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಎಸ್‌ಎಂ/ಕೆಎಂ

# ಪ್ರಶಸ್ತಿ ಪುರಸ್ಕೃತ ಚಿತ್ರಗಳ ಪ್ರದರ್ಶನ

ಬೆಂಗಳೂರು, ಏಪ್ರಿಲ್ 25 ( ಕರ್ನಾಟಕ ವಾರ್ತೆ) :

ಪ್ರಶಸ್ತಿ ಪಡೆದ ಚಿತ್ರಗಳನ್ನು ಜನಸಾಮಾನ್ಯರು ನೋಡುವುದಿಲ್ಲ ಎನ್ನುವುದಕ್ಕಿಂತ ಅವರಿಗೆ ನೋಡುವ ಭಾಗ್ಯ ಒದಗಿಸಿಕೊಡಬೇಕು ಎಂದು ಗೃಹ ಸಚಿವ ಡಾ: ಜಿ. ಪರಮೇಶ್ವರ ಅವರು ತಿಳಿಸಿದರು.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ ಜಂಟಿಯಾಗಿ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಇಂದಿನಿಂದ 5 ದಿನಗಳ ಕಾಲ ಹಮ್ಮಿಕೊಂಡಿರುವ ರಾಷ್ಟ್ರ-ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಪನೋರಮಾ ಕನ್ನಡ ಚಿತ್ರಗಳ ಚಿತ್ರೋತ್ಸವವನ್ನು ಉದ್ಘಾಟಿಸಿದರು ಮಾತನಾಡಿದರು.

ಆದರ್ಶಗಳು ಮತ್ತು ಮೌಲ್ಯಗಳು ಪರಿಣಾಮಕಾರಿಯಾಗಿ ಮುಂದಿನ ತಲೆಮಾರುಗಳಿಗೆ ತಲುಪಲು ಚಲನಚಿತ್ರ ರಂಗಕ್ಕೆ ಮಾತ್ರ ಸಾಧ್ಯ. ಚಲನಚಿತ್ರ ತಲೆಮಾರಿನಿಂದ ತಲೆಮಾರಿಗೆ ಸಂದೇಶವನ್ನು ವರ್ಗಾಯಿಸಬಲ್ಲದು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವರನಟ ರಾಜ್‌ಕುಮಾರ್ ಅವರನ್ನು ಸ್ಮರಿಸಿದ ಸಚಿವರು ರಾಜ್‌ಕುಮಾರ್ ಕನ್ನಡ ಚಿತ್ರರಂಗಕ್ಕೆ ಮಾತ್ರ ಸೀಮಿತವಲ್ಲ. ಅವರೊಬ್ಬ ಜಾಗತಿಕ ಕಲಾವಿದ ಎಂದು ಅಭಿಪ್ರಾಯಪಟ್ಟರು. ರಾಜ್‌ಕುಮಾರ್ ಅವರು ವೀರಪ್ಪನ್‌ನಿಂದ ಬಿಡುಗಡೆಗೊಂಡು ಬಂದಾಗ ತುಮಕೂರಿನಲ್ಲಿ ಆಯೋಜಿಸಿದ್ದ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿದ್ದನ್ನು ಅವರು ಸ್ಮರಿಸಿಕೊಂಡರು.

ಕನ್ನಡ ಚಲನಚಿತ್ರರಂಗ ಚಿಕ್ಕದೇನಲ್ಲ. ಮನಸ್ಸು ಮಾಡಿದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಬಹುದು. ಯುವ ನಿರ್ದೇಶಕರು ಈ ಸವಾಲನ್ನು ಸ್ವೀಕರಿಸಬೇಕು. ಸರ್ಕಾರ ಸದಾ ನಿಮ್ಮ ಬೆಂಬಲಕ್ಕೆ ಸಿದ್ಧವಿದೆ. ಚಲನಚಿತ್ರರಂಗಕ್ಕೆ ಉನ್ನತಮಟ್ಟಕ್ಕೆ ಏರಿಸುವ ಕೆಲಸ ನಡೆಯಬೇಕಾಗಿದೆ ಎಂದು ತಿಳಿಸಿದರು. ಈ ಹೊಸ ಪ್ರಯತ್ನಗಳು ದೊಡ್ಡಮಟ್ಟಕ್ಕೆ ಬೆಳೆಯಲಿ ಎಂದು ಆಶಿಸಿದರು.

ಪ್ರಧಾನ ಭಾಷಣಕಾರರಾಗಿ ಆಗಮಿಸಿದ್ದ ಹಿರಿಯ ನಿರ್ದೇಶಕ ಗಿರೀಶ್ ಕಾಸರವಳ್ಳಿ ಅವರು ಮಾತನಾಡಿ ಪ್ರಶಸ್ತಿ ವಿಜೇತ ಚಿತ್ರಗಳ ಬಗ್ಗೆ ಜನಸಾಮಾನ್ಯರಿಗೆ ಅನುಮಾನಗಳಿರುತ್ತವೆ. ಇಂತಹ ಉತ್ಸವಗಳ ಮೂಲಕ ಈ ಚಿತ್ರಗಳನ್ನು ಪ್ರದರ್ಶಿಸಿ ಅವರಿಗೆ ಮನದಟ್ಟು ಮಾಡಿಕೊಡಬೇಕು. ಮುಂದುವರೆದ ದೇಶಗಳಲ್ಲಿ ಈ ರೀತಿ ಅನೇಕ ಉತ್ಸವಗಳು ಆಗುತ್ತವೆ ಎಂದು ಅಭಿಪ್ರಾಯಪಟ್ಟರು. ಹೊಸಬರು ಬಂದಾಗ ಹೊಸ ಪ್ರಯೋಗಗಳು

ನಡೆಯುತ್ತವೆ. ಹಾಗೆಂದು ಹಿರಿಯರನ್ನು ಮರೆಯಬಾರದು. ಇದೊಂದು ಉತ್ತಮ ಪ್ರಯೋಗ ಸಿನಿಮಾದ ತಂತ್ರಜ್ಞರ ಜೊತೆ ಸಂವಾದವನ್ನು ಸಹಾ ಹಮ್ಮಿಕೊಳ್ಳುವಂತೆ ಅವರು ಸಲಹೆ ನೀಡಿದರು. ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಕನ್ನಡ ಸಿನಿಮ ಗುರುತಿಸಿಕೊಳ್ಳಲು ತಜ್ಞರು ಮತ್ತು ತಂತ್ರಜ್ಞರ ನಡುವೆ ಸಂವಾದ ನಡೆಯುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ವಿಧಾನ ಪರಿಷತ್ ಸದಸ್ಯೆ ನಟಿ ಜಯಮಾಲ ಅವರು ಮಾತನಾಡಿ ಜೀವಮಾನ ಸಾಧನೆಗಾಗಿ ನೀಡುವ ಪ್ರಶಸ್ತಿಗೆ ಸ್ಥಳೀಯ ಇತರ ಭಾಷೆಗಳ ಚಲನಚಿತ್ರ ಸಾಧಕರನ್ನೂ ಸಹ ಪರಿಗಣಿಸುವಂತೆ ಮನವಿ ಮಾಡಿದರು.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಅವರು ಮಾತನಾಡಿ ಪೈರಸಿಯನ್ನು ತಡೆಯಲು ಕಠಿಣ ಕ್ರಮ ಕೈಗೊಳ್ಳುವಂತೆ ಗೃಹ ಮಂತ್ರಿಗಳಲ್ಲಿ ಮನವಿ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಕಾಡೆಮಿ ಅಧ್ಯಕ್ಷ ರಾಜೇಂದ್ರಸಿಂಗ್ ಬಾಬು ಅವರು ಗಿರೀಶ್ ಕಾಸರವಳ್ಳಿ ಅವರ ಸಲಹೆ ಮೇರೆಗೆ ಈ ಚಿತ್ರೋತ್ಸವವನ್ನು ಹಮ್ಮಿಕೊಳ್ಳಲಾಗಿದ್ದು ನಂತರದ ದಿನಗಳಲ್ಲಿ ಜಿಲ್ಲಾ ಕೇಂದ್ರಗಳಲ್ಲೂ ಈ ಚಿತ್ರೋತ್ಸವವನ್ನು ಹಮ್ಮಿಕೊಳ್ಳಲು ಚಿಂತನೆ ನಡೆಸಲಾಗಿದೆ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಮಾತನಾಡಿ ಹೊಸ ಕಲಾವಿದರು ಮತ್ತು ತಂತ್ರಜ್ಞರು ಕನ್ನಡ ಸಿನಿಮಾರಂಗಕ್ಕೆ ಪ್ರವೇಶಸಿರುತ್ತಿರುವುದು ಹರ್ಷದಾಯಕ ವಿಷಯ. ಕನ್ನಡ ಚಿತ್ರರಂಗದ ಸುವರ್ಣ ಕಾಲ ಮತ್ತೊಮ್ಮೆ ಮರುಕಳಿಸಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ನಿರ್ದೇಶಕ ಪಿ. ಶೇಷಾದ್ರಿ, ಕಂಠೀರವ ಸ್ಟುಡಿಯೋಸ್ ಅಧ್ಯಕ್ಷೆ ಅಶ್ವಿನಿ ಕೃಷ್ಣಮೂರ್ತಿ, ಉಪಸ್ಥಿತರಿದ್ದರು. ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಸ್ವಾಗತಿಸಿ ವಂದಿಸಿದರು. ಉದ್ಘಾಟನೆಯ ನಂತರ ರಾಷ್ಟ್ರೀಯ ಬಾಲ ನಟ ಪ್ರಶಸ್ತಿ ವಿಜೇತ ಚಿತ್ರ "ರೈಲ್ವೆ ಚಿಲ್ಡ್ರನ್" ಸಿನಿಮಾವನ್ನು ಪ್ರದರ್ಶಿಸಲಾಯಿತು.

ಏಪ್ರಿಲ್ 26 ರಂದು ಬೆಳಿಗ್ಗೆ 11–00 ಗಂಟೆಗೆ "ರಿಸರ್ವೇಶನ್" ಮಧ್ಯಾಹ್ನ 2–30 ಗಂಟೆಗೆ "ಮದಿಪು", ಸಂಜೆ 5–00 ಗಂಟೆಗೆ "ಅಮರಾವತಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.

ಎಸ್‌ಎಂ/ಜೆಡಿ/ ಕೆಎಂ

## ಹೆಚ್ಚು ಅಂಕ ಗಳಿಸಿ ಅರಿವು ಶಿಕ್ಷಣ ಸಾಲ ಯೋಜನೆಯ ಸದುಪಯೋಗಪಡಿಸಿಕೊಳ್ಳಿ : ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಕಿವಿಮಾತು

**ಬೆಂಗಳೂರು, ಏಪ್ರಿಲ್ 25 ( ಕರ್ನಾಟಕ ವಾರ್ತೆ) :**

ಹೆಚ್ಚು ಅಂಕ ಗಳಿಸುವ ಮೂಲಕ ಅರಿವು ಶಿಕ್ಷಣ ಸಾಲ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅರಿವು ಶಿಕ್ಷಣ ಸಾಲ ಯೋಜನೆಯಡಿ ಆಯ್ಕೆಯಾದ ಫಲಾನುಭವೀ ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ನೆರವು ಒದಗಿಸಲು ಬೋಧನಾ ಶುಲ್ಕವನ್ನು ಮುಂಗಡವಾಗಿ ಪಾವತಿಸಲು 20 ಕೋಟಿ ರೂ ಮೊತ್ತದ ಚೆಕ್ಕನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಹಸ್ತಾಂತರಿಸಿದ ನಂತರ ಅರಿವು 0.2 ಹೊಸ ತಂತ್ರಾಂಶಕ್ಕೆ ಚಾಲನೆ ನೀಡಿ ಸಿದ್ದರಾಮಯ್ಯ ಅವರು ಮಾತನಾಡುತ್ತಿದ್ದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವ ತನ್ವೀರ್ ಸೇಠ್ ಅವರು 2017 ನೇ ಸಾಲಿನ ವೃತ್ತಿಪರ ಶಿಕ್ಷಣ ಹಾಗೂ ಇನ್ನಿತರ ಶಿಕ್ಷಣದ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ನಿಗಮದಿಂದ ಹೊಸ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗುವುದು. ಈ ತಂತ್ರಾಂಶದ ಬಳಕೆಯಿಂದ ಅರ್ಜಿಯ ಪರಿಶೀಲನಾ ಪ್ರಕ್ರಿಯೆ ಅತ್ಯಂತ ಕ್ಷಿಪ್ರವಾಗಿ ನಡೆಯಲು ಅನುಕೂಲವಾಗಲಿದೆ ಎಂದರು.

ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು ಅರಿವು ಯೋಜನೆಯಲ್ಲಿ ಉತ್ತಮ ಸಾಧನೆ ಮಾಡಿದೆ. ಅದರಂತೆ, 2014-15 ನೇ ಸಾಲಿನಲ್ಲಿ 19,044 ಫಲಾನುಭವಿಗಳಿಗೆ 51.82 ಕೋಟಿ ರೂ, 2015-16 ನೇ ಸಾಲಿನಲ್ಲಿ 24,518 ಫಲಾನುಭವಿಗಳಿಗೆ 69.07 ಕೋಟಿ ರೂ ಹಾಗೂ 2016-17 ನೇ ಸಾಲಿನಲ್ಲಿ 23,822 ಫಲಾನುಭವಿಗಳಿಗೆ 82.79 ಕೋಟಿ ರೂ ವೆಚ್ಚ ಮಾಡಲಾಗಿದೆ. ಅರಿವು ಯೋಜನೆಗೆ ಪ್ರಸಕ್ತ ಸಾಲಿನಲ್ಲಿ 100 ಕೋಟಿ ರೂ ಮೀಸಲಿರಿಸಲಾಗಿದೆ ಎಂದು ಅಂಕಿ-ಅಂಶಗಳನ್ನು ವಿವರಿಸಿದರು.

ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಯು ಟಿ ಖಾದರ್, ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯ ರೆಡ್ಡಿ, ಕೋಲಾರ ಲೋಕಸಭಾ ಸದಸ್ಯ ಕೆ ಹೆಚ್ ಮುನಿಯಪ್ಪ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ್, ಅಲ್ಪಸಂಖ್ಯಾತರ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮೊಹಮದ್ ಮೊಹಸಿನ್, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ ಎ ಗಫೂರ್ ಹಾಗೂ ವ್ಯವಸ್ಥಾಪಕ ನಿರ್ದೇಶಕ ಎನ್ ಟಿ ಅಬ್ರೂ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

**************

ಡಿ ಪಿ ಎಂ : ಟಿ ಸಿ ಎಂ

## ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ರಾಜ್ಯ ಸರ್ಕಾರಕ್ಕೆ 2.59 ಕೋಟಿ ರೂ ಲಾಭಾಂಶ ಸಲ್ಲಿಕೆ, ಮುಖ್ಯಮಂತ್ರಿಯವರ ಪರಿಹಾರ ನಿಧಿಗೆ 30 ಲಕ್ಷ ರೂ ಅರ್ಪಣೆ

**ಬೆಂಗಳೂರು, ಏಪ್ರಿಲ್ 25 ( ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮವು 2016 ರ ಮಾರ್ಚ್ ಅಂತ್ಯಕ್ಕೆ ಕೊನೆಗೊಂಡ ವರ್ಷಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಕೊಡಮಾಡುವ ಷೇರು ಲಾಭಾಂಶದ ಮೊತ್ತವನ್ನು ನಿಗಮದ ಅಧ್ಯಕ್ಷ ಹಾಗೂ ಶಾಸಕ ವಸಂತ ಬಂಗೇರಾ ಅವರು 2.59 ಕೋಟಿ ರೂ ಚೆಕ್ಕನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಲ್ಲಿ ಇಂದು ಹಸ್ತಾಂತರಿಸುವ ಮೂಲಕ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ವಸಂತ ಬಂಗೇರಾ ಅವರು ನಿಗಮದ ವತಿಯಿಂದ 30 ಲಕ್ಷ ರೂ ಚೆಕ್ಕನ್ನು ಮುಖ್ಯಮಂತ್ರಿಯವರ ಪರಿಹಾರ ನಿಧಿಗೆ ಅರ್ಪಿಸಿದರು.

ಸಣ್ಣ ಕೈಗಾರಿಕಾ ಸಚಿವ ರಮೇಶ್ ಜಾರಕೀಹೊಳಿ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಎಂ ವಿ ಸಾವಿತ್ರಿ ಅವರೂ ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**************

ಡಿ ಪಿ ಎಂ : ಟಿ ಸಿ ಎಂ ಬಿ

## ಅರ್ಹ ಅಭ್ಯರ್ಥಿಗಳ ಮೂಲ ದಾಖಲೆ ಪರಿಶೀಲನೆ

**ಬೆಂಗಳೂರು, ಏಪ್ರಿಲ್ 25 ( ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕ ಸೇವಾ ಆಯೋಗವು ಕೃಷಿ ಮಾರಾಟ ಇಲಾಖೆಯಲ್ಲಿ ಕಿರಿಯ ಅಭಿಯಂತರರು(ಸಿವಿಲ್) (ಹೈ.ಕ), ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿ ಸಹಾಯಕ ಸಾಂಖ್ಯಿಕ ಅಧಿಕಾರಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಕೈಗಾರಿಕಾ ವಿಸ್ತರಣಾಧಿಕಾರಿ, ಪೌರಾಡಳಿತ ನಿರ್ದೇಶನಾಲಯದ ಮಹಾನಗರ ಪಾಲಿಕೆಗಳಲ್ಲಿ ಕಿರಿಯ ಅಭಿಯಂತರರು,(ಎಲೆಕ್ಟ್ರಿಕಲ್) ಪೌರಾಡಳಿತ ನಿರ್ದೇಶನಾಲಯದ ಮಹಾನಗರಪಾಲಿಕೆಗಳಲ್ಲಿ ಕಿರಿಯ ಎಲೆಕ್ಟ್ರೀಷಿಯನ್ ಗ್ರೇಡ್ –1, ಪೌರಾಡಳಿತ ನಿರ್ದೇಶನಾಲಯದ ಮಹಾನಗರಪಾಲಿಕೆಗಳಲ್ಲಿ ಕಾಮಗಾರಿ ಅಭಿಯಂತರರು, ಪೌರಾಡಳಿತ ನಿರ್ದೇಶನಾಲಯದ ನಗರ ಸಭೆ/ಪುರಸಭೆ ಕಿರಿಯ ಆರೋಗ್ಯ ನಿರೀಕ್ಷಕರು ಪೌರಾಡಳಿತ ನಿರ್ದೇಶನಾಲಯದ ನಗರಸಭೆ/ ಪೌರಾಡಳಿತ ನಿರ್ದೇಶನಾಲಯದ ನಗರಸಭೆ/ಪುರಸಭೆಗಳಲ್ಲಿ ಎಲೆಕ್ಟ್ರಿಷಿಯನ್ ಗ್ರೇಡ್ –1 ಪೌರಾಡಳಿತ ನಿರ್ದೇಶನಾಲಯದ ಆರೋಗ್ಯ ನಿರೀಕ್ಷಕರು ಹುದ್ದೆಗಳಿಗೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಛೇರಿಯಲ್ಲಿ 9–5–2017 ರಿಂದ 12–5–2017 ರವರೆಗೆ ಬೆಳಿಗ್ಗೆ 9–30 ಗಂಟೆಗೆ ಮತ್ತು ಮಧ್ಯಾಹ್ನ 2–00 ಗಂಟೆಗೆ ನಿಗದಿಪಡಿಸಲಾಗಿದೆ.

**ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಈಗಾಗಲೇ ಆಯೋಗದ ಅಂತರ್ಜಾಲ ತಾಣದಲ್ಲಿ ಪ್ರಕಟಿಸಲಾಗಿದೆ. ಸೂಚನಾಪತ್ರವನ್ನು ಅಭ್ಯರ್ಥಿಗಳು ತಮ್ಮ ನೋಂದಣಿ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಯೋಗದ ಅಂತರ್ಜಾಲ http://kpsc.kar.nic. ಯಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 7337830894 ನ್ನು ಸಂಪರ್ಕಿಸಬಹುದು.**

**ಎಸ್‌ಎಂ/ಕೆಎಂ**

# ಮೇ 2 ಮತ್ತು 3 ರಂದು ಸಾಮಾನ್ಯ ಪ್ರವೇಶ ಪರೀಕ್ಷೆ

ಬೆಂಗಳೂರು, ಏಪ್ರಿಲ್ 25 (ಕರ್ನಾಟಕ ವಾರ್ತೆ)

ಮೇ 2 ಮತ್ತು 3 ರಂದು 2017 ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆಯು ನಡೆಯಲಿದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜರಾಯರೆಡ್ಡಿ ಅವರು ತಿಳಿಸಿದ್ದಾರೆ.

ಮೊದಲಬಾರಿ ಪ್ರಶ್ನೆ ಪತ್ರಿಕೆಯನ್ನು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಮುದ್ರಿಸಲಾಗುತ್ತಿದೆ. ಮೇ 2 ರಂದು ಬೆಳಿಗ್ಗೆ 10.30 ರಿಂದ 11.50 ರ ವರೆಗೆ ಜೀವಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ಗಣಿತಶಾಸ್ತ್ರ ಹಾಗೂ ಮೇ 3 ರಂದು ಬೆಳಿಗ್ಗೆ 10.30 ರಿಂದ 11.50 ರ ವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ರಸಾಯನ ಶಾಸ್ತ್ರ ಪರೀಕ್ಷೆಗಳು ನಡೆಯಲಿದೆ. (60 ಅಂಕಗಳು)

ಹೊರನಾಡು/ಗಡಿನಾಡು ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ದಿನಾಂಕ 04-05-2017 ರಂದು ಬೆಂಗಳೂರು ಕೇಂದ್ರದಲ್ಲಿ ನಡೆಸಲಾಗುವುದು. ಸುಮಾರು 1,800 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಅನುಸರಿಸಬೇಕಾದ ಮಾರ್ಗಸೂಚಿಗಳು ಇಂತಿವೆ:

ಅಭ್ಯರ್ಥಿಗಳು ಮೇ 3 ರಂದು ಎರಡನೇ ದಿನದ ಕೊನೆಯ ಅವಧಿಯ ಪರೀಕ್ಷೆ ಮುಗಿದ ನಂತರ ತಮ್ಮ ತಮ್ಮ ಪರೀಕ್ಷಾ ಕೇಂದ್ರಗಳಿಂದ ಬ್ರೋಚರ್ ಅನ್ನು ಪಡೆದುಕೊಳ್ಳಬೇಕು.

ಉತ್ತರಗಳನ್ನು ಒಎಂಆರ್ ಉತ್ತರ ಪತ್ರಿಕೆಯಲ್ಲಿ ಶೇಡ್ ಮಾಡುವುದರ ಮೂಲಕ ಉತ್ತರಿಸಬೇಕಾಗಿರುವುದರಿಂದ, ಅಭ್ಯರ್ಥಿಗಳು ತಮ್ಮ ಜೊತೆಯಲ್ಲಿ ಬ್ಲೂ ಅಥವಾ ಬ್ಲಾಕ್ ಇಂಕ್ ಬಾಲ್ ಪಾಯಿಂಟ್ ಅನ್ನು ತೆಗೆದುಕೊಂಡು ಹೋಗಬೇಕು.

ಅಭ್ಯರ್ಥಿಗಳು ಪರೀಕ್ಷಾ ವೇಳಾಪಟ್ಟಿಯನ್ನು ಗಮನದಲ್ಲಿಟ್ಟುಕೊಳ್ಳುವುದು ಸೂಕ್ತ ಹಾಗೆಯೇ ಪರೀಕ್ಷೆಯ ಮೊದಲನೆ ಬೆಲ್ ಆಗುವ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರವನ್ನು ತಲುಪಬೇಕು.

ಪ್ರವೇಶ ಪತ್ರದ ಜೊತೆಯಲ್ಲಿ ಅಭ್ಯರ್ಥಿಯು ಕಡ್ಡಾಯವಾಗಿ ಮಾನ್ಯತೆ ಇರುವ ಯಾವುದಾದರೂ ಒಂದು ಕಾಲೇಜಿನ ಗುರುತಿನ ಚೀಟಿ, 2ನೇ ಪಿ.ಯು.ಸಿ/12ನೇ ತರಗತಿಯ ಪ್ರವೇಶ ಪತ್ರ, ಬಸ್‌ಪಾಸ್, ಡ್ರೈವಿಂಗ್ ಲೈಸೆನ್ಸ್, ಪಾಸ್‌ಪೋರ್ಟ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ಅನ್ನು ತೆಗೆದುಕೊಂಡು ಹೋಗಬೇಕು.

ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿಕೊಂಡು/ತೆಗೆದುಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಟ್ಯಾಬ್ಲೆಟ್/ಮೊಬೈಲ್/ಕ್ಯಾಲ್ಕುಲೇಟರ್‌ಗಳನ್ನು ತರುವಂತಿಲ್ಲ.

ರಾಜ್ಯಾದ್ಯಂತ ಪರೀಕ್ಷೆಯನ್ನು ಒಟ್ಟು 404 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಅವುಗಳಲ್ಲಿ 82 ಪರೀಕ್ಷಾ ಕೇಂದ್ರಗಳು ಬೆಂಗಳೂರಿನಲ್ಲಿ ಇವೆ.

ಒಟ್ಟು 1,85,411 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಣಿ ಮಾಡಿಸಿದ್ದಾರೆ. ಅವರಲ್ಲಿ 94,415 ಅಭ್ಯರ್ಥಿಗಳು, ಪುರುಷ ಅಭ್ಯರ್ಥಿಗಳು ಹಾಗೂ 90,996 ಮಹಿಳಾ ಅಭ್ಯರ್ಥಿಗಳು. ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಸಹಾಯಕ ಆಯುಕ್ತರನ್ನು ವೀಕ್ಷಕರನ್ನಾಗಿ ನೇಮಕ ಮಾಡಿರುತ್ತಾರೆ.

ಒಟ್ಟು 404 ವೀಕ್ಷಕರು, 808 ವಿಶೇಷ ಜಾಗೃತ ದಳದ ಸದಸ್ಯರು, 404 ಪ್ರಶ್ನೆ ಪತ್ರಿಕೆ ಪಾಲಕರು, ಸುಮಾರು 11,625 ಕೊಠಡಿ ಮೇಲ್ವಿಚಾರಕರು ಹಾಗೂ 32,000 ಅಧಿಕಾರಿ/ಸಿಬ್ಬಂದಿ ವರ್ಗದವರನ್ನು ನೇಮಿಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಡಿ. ಎಸ್.ಜಿ. ಬಾಳೇಕುಂದ್ರಿ ಪ್ರಶಸ್ತಿ ಪ್ರಕಟ

ಬೆಂಗಳೂರು, ಏಪ್ರಿಲ್ 25 (ಕರ್ನಾಟಕ ವಾರ್ತೆ)

ಜಲಸಂಪನ್ಮೂಲ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಎಲ್ಲಾ ವೃಂದದ ಅಭಿಯಂತರುಗಳಿಗೆ ನೀಡುವ ದಿ. ಎಸ್. ಜಿ. ಬಾಳೇಕುಂದ್ರಿ ಪ್ರಶಸ್ತಿಯ 2015 ಮತ್ತು 2016ನೇ ಸಾಲಿನ ಒಟ್ಟು 6 ಜನರಿಗೆ ಪ್ರಶಸ್ತಿ ಘೋಷಿಸಲಾಗಿದೆ.

ದಿ. ಎಸ್. ಜಿ. ಬಾಳೇಕುಂದ್ರಿ ಅವರ ಜನ್ಮ ದಿನದಂದು ಅವರ ಹೆಸರಿನಲ್ಲಿ ನೀಡುವ ಈ ಪ್ರಶಸ್ತಿಗೆ 2015 ನೇ ಸಾಲಿಗಾಗಿ ಕಲಬುರಗಿಯ ಜಗನ್ನಾಥ ಹಲಿಂಗೆ, ಅಧೀಕ್ಷಕ ಅಭಿಯಂತರರು, ಐ.ಪಿ.ಸಿ. ವೃತ್ತ ಇವರಿಗೆ ಪ್ರಶಸ್ತಿ ಲಭಿಸಿದೆ.

2016 ನೇ ಸಾಲಿಗಾಗಿ ಮಾಧವ, ಅಧೀಕ್ಷಕ ಅಭಿಯಂತರರು, ಜಲ ವಿಜ್ಞಾನ ಘಟಕ, ಜ.ಸಂ.ಅ, ಸಂಸ್ಥೆ, ಬೆಂಗಳೂರು. ಹೊಸದುರ್ಗದ ಸಿ.ಎಲ್. ಪುಟ್ಟಸ್ವಾಮಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಭದ್ರಾ ಮೇಲ್ದಂಡೆ ಯೋಜನೆ, ಉಪ ವಿಭಾಗ, ಪಿ.ಕೆ. ಶಂಕರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೃ. ಭಾ.ಜ.ನಿನಿ. ಎ.ಎಲ್.ಐ. ಉಪವಿಭಾಗ ಹಲಗಣಿ, ಶ್ರೀಮತಿ ಪ್ರೇಮಲತ ಆರ್. ಸಹಾಯಕ ಇಂಜಿನಿಯರ್, ಕಾವೇರಿ ಘಟಕ, ಜ.ಸಂ.ಆ.ಸಂಸ್ಥೆ, ಬೆಂಗಳೂರು ಹಾಗೂ ಹಳ್ಳೂರು, ಸಹಾಯಕ ಇಂಜಿನಿಯರ್, ಕೃ.ಭಾ, ಜ.ನಿ.ನಿ. ಆಣೆಕಟ್ಟು ಉಪ ವಿಭಾಗ-3 ನಾರಾಯಣಪೂರ ಇವರಿಗೆ ದಿ. ಎಸ್. ಜಿ. ಬಾಳೇಕುಂದ್ರಿ ಪ್ರಶಸ್ತಿಯನ್ನು ರಾಜ್ಯ ಸರ್ಕಾರ ಪ್ರಕಟಿಸಿ ಆದೇಶ ಹೊರಡಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಹೋಟೆಲ್‌ಗಳಲ್ಲಿ ಗ್ರಾಹಕರಿಗೆ ಸೇವಾ ಶುಲ್ಕವನ್ನು ವಿಧಿಸಿದರೆ ಕ್ರಮ

**- ಸಚಿವ ಯು.ಟಿ. ಖಾದರ್**

ಬೆಂಗಳೂರು, ಏಪ್ರಿಲ್ 25 (ಕರ್ನಾಟಕ ವಾರ್ತೆ)

ಹೋಟೆಲ್‌ಗಳಲ್ಲಿ ಗ್ರಾಹಕರಿಗೆ ಸೇವಾ ಶುಲ್ಕವನ್ನು ವಿಧಿಸದಂತೆ ಮುಂಬರುವ ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ಅವರು ಇಂದು ವಿಕಾಸಸೌಧದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು, ಮಂತ್ರಾಲಯವು ಕಳುಹಿಸಿರುವ ಆದೇಶದನ್ವಯ, ಈ ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ಜಾಗೃತಿಯನ್ನು ಸಹ ಮೂಡಿಸಲಾಗುವುದು. ಆಹಾರವನ್ನು ಸಾರ್ವಜನಿಕರು ವ್ಯರ್ಥ ಮಾಡದಂತೆ ಕ್ರಮ ವಹಿಸಬೇಕು. ಮಿಕ್ಕ ಆಹಾರವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಬೇಕು. ಈ ಹಿಂದೆ ಹೋಟೆಲ್‌ಗಳಲ್ಲಿ ಶೇ 6 ರಿಂದ 8 ರಷ್ಟು ಸೇವಾ ಶುಲ್ಕವನ್ನು ವಿಧಿಸುತ್ತಿದ್ದರು. ಯಾವುದೇ ಗ್ರಾಹಕನು ಹೋಟೆಲ್‌ಗಳಲ್ಲಿ ಸೇವಾ ಶುಲ್ಕವನ್ನು ಹೇರಿಸುವುದರ ವಿರುದ್ಧ ಜಿಲ್ಲಾ ಗ್ರಾಹಕರ ನ್ಯಾಯಾಲಯದ ಮೊರೆ ಹೋಗಬಹುದು. ಅದನ್ನು ಕಾನೂನು ವ್ಯಾಪ್ತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದ ಅನಿಲ ರಹಿತ ಪಡಿತರ ಚೀಟಿದಾರರಿಗೆ ಉಚಿತ ಅನಿಲ ಸಂಪರ್ಕ ಒದಗಿಸಲು 'ಅನಿಲ ಭಾಗ್ಯ" ವನ್ನು ಹಾಗೂ ಗ್ರಾಮೀಣ ಪ್ರದೇಶದ ಅನಿಲ ಪಡಿತರ ಚೀಟಿಗಳಿಗೆ ಅವರ ಆಯ್ಕೆ ಮೇರೆಗೆ ಪಡಿತರ ಸೀಮೆ ಎಣ್ಣೆ ಬದಲಿಗೆ ಪುನರ್‌ಭರ್ತಿ (ರೀಚಾರ್ಜೆಬಲ್) ಎಲ್‌ಇಡಿ ಬಲ್ಬ್‌ಸೆಟ್‌ಗಳನ್ನು ನೀಡುವ ಪುನರ್ಬೆಳಕು ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದೆಂದರು.

ಉಜ್ವಲ ಯೋಜನೆಯಡಿ ಕೇಂದ್ರ ಸರ್ಕಾರವು ಆಯ್ಕೆಯಾದ ಫಲಾನುಭವಿಗಳಿಗೆ ಉಚಿತ ಅನಿಲ ಸಂಪರ್ಕ ನೀಡುತ್ತದೆ. ಇದಕ್ಕೆ ಪೂರಕವಾಗಿ ರಾಜ್ಯ ಸರ್ಕಾರವು 1000 ರೂ ಬೆಲೆಯುಳ್ಳ ಎರಡು ಬರ್ನರ್‌ಗಳ ಗ್ಲಾಸ್ ಸ್ಟವ್‌ಅನ್ನು ನೀಡುತ್ತದೆ. ರಾಜ್ಯವನ್ನು ಶೇ 100 ರಷ್ಟು ಎಲ್‌ಪಿಜಿ ಯುಕ್ತ ರಾಜ್ಯವನ್ನಾಗಿಸಲು ಕೇಂದ್ರ ಸರ್ಕಾರದ ಉಜ್ವಲ ಯೋಜನೆಯ ವ್ಯಾಪ್ತಿಗೆ ಒಳಪಡದೇ ಇರುವ ಕುಟುಂಬಗಳಿಗೂ ಸಹ ರಾಜ್ಯ ಸರ್ಕಾರ ವತಿಯಿಂದ ಉಚಿತ ಅನಿಲ ಸಂಪರ್ಕವನ್ನು 'ಅನಿಲಭಾಗ್ಯ' ಯೋಜನೆಯಡಿ ನೀಡಲು ಉದ್ದೇಶಿಸಿದೆ. ಗ್ರಾಮೀಣ ಭಾಗದ ಗ್ಯಾಸ್ ಸಂಪರ್ಕವಿರುವ ಗ್ರಾಹಕರಿಗೆ ಕಾರ್ಡ್‌ಗೆ 1 ಲೀಟರ್ ಸೀಮೆಎಣ್ಣೆಯನ್ನು ಸಹ ನೀಡಲಾಗುವುದು ಎಂದರು.

ಅನಿಲಭಾಗ್ಯ ಯೋಜನೆಯಡಿ 5 ಲಕ್ಷ ಅರ್ಹ ಬಡಕುಟುಂಬಗಳಿಗೆ ಉಚಿತವಾಗಿ ಅನಿಲ ಸಂಪರ್ಕಕ್ಕಾಗಿ ಪ್ರತಿ ಫಲಾನುಭವಿಗಳಿಗೆ 1600 ರೂ. ಸಹಾಯಧನ ವಿತರಣೆ ಹಾಗೂ ಅನಿಲ ಸೌಲಭ್ಯದೊಂದಿಗೆ ಗ್ರಾಮೀಣ ಪ್ರದೇಶದ ಪಡಿತರ ಚೀಟಿದಾರರಿಗೆ ತಮಗೆ ಹಂಚಿಕೆಯಾದ ಸೀಮೆಎಣ್ಣೆ ಅಥವಾ ಉಚಿತ ರೀಚಾರ್ಜೆಬಲ್ ಎಲ್‌ಇಡಿ ಸೆಟ್‌ಗಳನ್ನು ಆಯ್ಕೆ ಮಾಡುವ ಅವಕಾಶ ಕಲ್ಪಿಸಲಾಗಿದೆ ಎಂದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಹರ್ಷ ಗುಪ್ತಾ ಉಪಸ್ಥಿತರಿದ್ದರು.

ಎಸ್‌ಎಂ:ಕೆಎನ್‌ಕೆ:ಜಿಪಿಆರ್.

# ಪುಸ್ತಕ ಮಾರಾಟಕ್ಕೆ ಲಭ್ಯ

ಬೆಂಗಳೂರು, ಏಪ್ರಿಲ್ 25 (ಕರ್ನಾಟಕ ವಾರ್ತೆ)

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯು 2016-17 ನೇ ಸಾಲಿನಲ್ಲಿ ಪ್ರಕಟಿಸಿರುವ "ತುಮಕೂರು ಜಿಲ್ಲಾ ಗ್ಯಾಸೆಟಿಯರ್" (ಕನ್ನಡ ಆವೃತ್ತಿ), ಸಿ. ಹಯವದನ ರಾವ್ ಇವರು ಸಂಪಾದಿಸಿರುವ ಹಿಸ್ಟರಿ ಆಫ್ ಮೈಸೂರು ಹಾಗೂ "ಕರ್ನಾಟಕ ಕೈಪಿಡಿ" (ಪರಿಷ್ಕೃತ ಆವೃತ್ತಿ) ಸಂಪುಟಗಳು ಮೈಸೂರು ಧಾರವಾಡ ಹಾಗೂ ಕಲಬುರಗಿ, ಬೆಂಗಳೂರಿನ ಶಾಖಾ ಮುದ್ರಣಾಲಯಗಳಲ್ಲಿ ಹಾಗೂ ಬೆಂಗಳೂರಿನ ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಕಚೇರಿಯಲ್ಲಿ ಮಾರಾಟಕ್ಕೆ ಲಭ್ಯವಿದ್ದು, ಸಾರ್ವಜನಿಕರು ಇದರ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂಕೆಎನ್‌ಕೆ:ಜಿಪಿಆರ್.